ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

*ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ*

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001

ಸಂಖ್ಯೆ: ವಾಇ : ಸುಮಪ : ಪ ಪ್ರ : 2014–15 : ಆಗಸ್ಟ್ 5 , 2014

ಪತ್ರಿಕಾ ಪ್ರಕಟಣೆ

# ಸೂಳಿಕೇರಿ ತೆರೆದ ಕೊಳವೆ ಬಾವಿಗೆ ಬಾಲಕ ಬಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಅಧಿಕಾರಿಗಳ ಅಮಾನತ್ತು

ಬೆಂಗಳೂರು, ಆಗಸ್ಟ್ 5 (ಕರ್ನಾಟಕ ವಾರ್ತೆ) :

ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲ್ಲೂಕಿನ ಸೂಳಿಕೇರಿ ಗ್ರಾಮದಲ್ಲಿ ತೆರದ ಕೊಳವೆ ಬಾವಿಯಲ್ಲಿ ಬಾಲಕ ಬಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಅಧಿಕಾರಿಗಳನ್ನು ಅಮಾನತ್ತು ಮಾಡಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ.

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಅನುಪಯುಕ್ತ, ವಿಫಲವಾದ ಹಾಗೂ ತೆರೆದ ಕೊಳವೆ ಬಾವಿಗಳಲ್ಲಿ ಮಕ್ಕಳು ಬಿದ್ದು ಸಾವು–ನೋವು ಸಂಭವಿಸುವುದನ್ನು ತಡೆಯಲು ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳನ್ನು ದಿನಾಂಕ : 20–06–2014 ರಂದು ಈಗಾಗಲೇ ಸರ್ಕಾರ ಸುತ್ತೋಲೆ ಹೊರಡಿಸಿ, ಸುತ್ತೋಲೆಯಲ್ಲಿನ ಮಾರ್ಗಸೂಚಿಗಳನ್ನು ಪಾಲಿಸದೇ ಇದ್ದಲ್ಲಿ ಕೊಳವೆ ಬಾವಿ ಮಾಲೀಕರು, ಕೊಳವೆ ಬಾವಿ ಕೊರೆದ ಸಂಸ್ಥೆ ಹಾಗೂ ಸಂಬಂಧಿಸಿದ ಜಿಲ್ಲಾ ಪಂಚಾಯತ್ ಹಾಗೂ ಗ್ರಾಮ ಪಂಚಾಯತ್ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದೆಂದು ಸ್ಪಷ್ಟವಾಗಿ ತಿಳಿಸಿದ್ದರೂ, ಅವುಗಳನ್ನು ಪಾಲಿಸದೇ ಕರ್ತವ್ಯ ಲೋಪ ಎಸಗಿರುವ ಆರೋಪದ ಮೇರೆಗೆ ಬಾದಾಮಿಯ ಪಂಚಾಯತ್ ಇಂಜಿನಿಯರಿಂಗ್ ವಿಭಾಗದ ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಶ್ರೀ ಈಶ್ವರ ಬಿ ಕುರುಬಗಟ್ಟಿ ಹಾಗೂ ಸೂಳಿಕೇರಿ ಗ್ರಾಮ ಪಂಚಾಯತ್‌ನ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಶ್ರೀ ಶೌಕತ್ ಅಲಿ ಮುನ್ನಾಳ ಅವರನ್ನು ಇಲಾಖಾ ವಿಚಾರಣೆ ಬಾಕಿ ಇರಿಸಿ, ಸರ್ಕಾರಿ ಸೇವೆಯಿಂದ ಅಮಾನತ್ತು ಮಾಡಲಾಗಿದೆ.

**********

ಡಿ ಪಿ ಎಂ